MVC No.203/2021
RW-01

ದಿನಾಂಕಃ 04-08-2026.
ಪ್ರಮಾಣ ವಚನ ಭೋದಿಸಲಾಯಿತು.

**ಮುಖ್ಯ ವಿಚಾರಣೆಃ 2 ನೇ ಎದುರುದಾರರ ಪರ ಮಾನ್ಯ ಶ್ರೀ TGK ವಕೀಲರಿಂದ ಃ**

ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರ ಸಲ್ಲಿಸಿದ್ದು ಅದರಲ್ಲಿ ಬರೆದ ಎಲ್ಲಾ ಸಂಗತಿಗಳು ಸತ್ಯವಾಗಿರುತ್ತವೆ.

2. ಅಧಿಕಾರ ಪತ್ರವನ್ನು ನಿ.ಆರ್.1, ವಾಹನ ನಂಬರ AP-02-W-9693 ಇದರ ವಿಮಾ ಪಾಲಿಸಿಯ ಪ್ರತಿಯನ್ನು ನಿ.ಆರ್.2 ಎಂದು ಗುರುತಿಸಲಾದವು. ಪ್ರಸ್ತುತ ಅರ್ಜಿಯನ್ನು ವಜಾ ಮಾಡಬೇಕೆಂದು ಕೇಳಿಕೊಳ್ಳುತ್ತೇನೆ.

**ಪಾಟಿ ಸವಾಲುಃ ಅರ್ಜಿದಾರರ ಪರವಾಗಿ ಶ್ರೀ HRP ಮಾನ್ಯ ವಕೀಲರಿಂದ :**

3. ಸದರಿ ಅಪಘಾತವಾದ ದಿನದಂದು ಸದರಿ ವಾಹನ ವಿಮೆ ಚಾಲ್ತಿಯಲ್ಲಿತ್ತು ಎಂದರೆ ಸರಿ. ನನಗೆ ಮೃತ ಮಾಳಪ್ಪ ಇವರ ವಯಕ್ತಿಕ ಮಾಹಿತಿ ತಿಳಿದಿರುವುದಿಲ್ಲ ಎಂದರೆ ಸರಿ. ಸಾಕ್ಷಿಗೆ ಈಗೆ RTO ದವರಿಂದ ಸದರಿ ವಾಹನದ ಚಾಲಕ DL ನ್ನು ಹೊಂದಿರುವುದಿಲ್ಲ ಎಂದು ರುಜುವಾತುಪಡಿಸಲು ದಾಖಲೆಗಳನ್ನು ಪಡೆದುಕೊಂಡಿರುತ್ತೀರಾ ಎಂದು ಕೇಳಿದ್ದಕ್ಕೆ ಸಾಕ್ಷಿ ಅದರ ಬಗ್ಗೆ ಅಂತಿಮ ವರದಿಯಲ್ಲಿ ನಮೂದು ಮಾಡಿರುವುದಾಗಿ ಹೇಳುತ್ತಾರೆ. ಸದರಿ ಅಪಘಾತವಾದ ದಿನದಂದು ಸದರಿ ವಾಹನದ ಚಾಲಕ DL ನ್ನು ಹೊಂದಿದ್ದರೂ ಕೂಡಾ ಇಲ್ಲ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಎದುರುದಾರರು ಅರ್ಜಿದಾರರಿಗೆ ಪರಿಹಾರದ ಹಣವನ್ನು ಕೊಡುವುದನ್ನು ತಪ್ಪಿಸಲು ನಾನು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನನ್ನ ಮುಖ್ಯ ವಿಚಾರಣೆಯಲ್ಲಿರುವ ವಿಚಾರಗಳು ಸುಳ್ಳಾಗಿರುತ್ತವೆ ಎಂದರೆ ಸರಿಯಲ್ಲ. ಆದ್ದರಿಂದ ನಾವು ಅರ್ಜಿದಾರರಿಗೆ ಪರಿಹಾರದ ಹಣವನ್ನು ಕೊಡುವ ಭಾದ್ಯತೆಯನ್ನು

ಹೊಂದಿರುತ್ತೇವೆ ಎಂದರೆ ಸರಿಯಲ್ಲ.

**ಮರು ವಿಚಾರಣೆ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯ ಪ್ರಕಾರ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೆ.ಸರಿ. ಇದೆ.

ಹಿರಿಯ ಸಿವಿಲ್ ನ್ಯಾಯಾಧೀಶರು,
ಮತ್ತು. ಪ್ರ.ದ.ನ್ಯಾ.ದಂ. ಶಹಾಪೂರ